# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1313 (1463) |
| ಸದಸ್ಯರ ಹೆಸರು | : ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 17.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಅಡಿಕೆ ಮರಗಳು ಅಧಿಕ ಪ್ರಮಾಣದಲ್ಲಿ ನಾಶವಾಗಿದ್ದು, ಅಡಿಕೆ ಬೆಳೆಗಾರರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು); | ಬಂದಿರುತ್ತದೆ.<br><br>ಅಡಿಕೆ ಬೆಳೆಯು ಬಹುವಾರ್ಷಿಕ ತೋಟಗಾರಿಕೆ ಬೆಳೆಯಾಗಿರುವುದರಿಂದ ಬೆಳೆಹಾನಿಗೆ NDRF/SDRF ಮಾರ್ಗಸೂಚಿಯನ್ವಯ ರೂ. 22500 ಪ್ರತಿ ಹೆಕ್ಟೇರ್ ಗೆ ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರ್ ಗೆ ರೂ. 8500 ನಂತೆ ಒಟ್ಟು ಪ್ರತಿ ಹೆಕ್ಟೇರ್ ಗೆ ರೂ. 31000 ಪರಿಹಾರವನ್ನು ರೈತರಿಗೆ 2.00 ಹೆಕ್ಟೇರ್ ವರೆಗೆ ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗುತ್ತಿದೆ.<br><br>ಪ್ರಸ್ತುತ ಸಾಲಿನಲ್ಲಿ ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಬೆಳೆಹಾನಿಯಾದ ಒಟ್ಟು 244 ರೈತರಿಗೆ ರೂ. 16.63 ಲಕ್ಷಗಳ ಪರಿಹಾರಧನವನ್ನು ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗಿ ಕಂದಾಯ ಇಲಾಖೆ ವರದಿ ಮಾಡಿದೆ. |
| (ಆ) | ಅಡಿಕೆಗೆ ಕೊಳೆರೋಗ ಹರಡಿ ಅತೀ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಬಗ್ಗೆ ಸರ್ಕಾರ ಸರ್ವೆ ಮಾಡಿದೆಯೇ; ಅಡಿಕೆ ಬೆಳೆಗಾರರಿಗೆ ಸೂಕ್ತ ಪರಿಹಾರ ಒದಗಿಸಲಾಗಿದೆಯೇ; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಕೊಳೆರೋಗವು ಹರಡಿರುವ ಬಗ್ಗೆ ತೋಟಗಾರಿಕೆ ಇಲಾಖೆಯ ಸ್ಥಳೀಯ ಅಧಿಕಾರಿಗಳು ಅಂದಾಜು ಮಾಡಿರುತ್ತಾರೆ.<br>ತೋಟಗಾರಿಕೆ ಇಲಾಖೆಯ RWBCIS ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಬೆಳೆಯನ್ನು ಅಧಿಸೂಚಿಸಲಾಗಿದ್ದು ಪ್ರಸ್ತುತ ಸಾಲಿನಲ್ಲಿ 296068 ರೈತ ಅರ್ಜಿಗಳನ್ನು ನೊಂದಾಯಿಸಲಾಗಿದೆ. ಈ ಬೆಳೆಗಾರರಿಗೆ ಟರ್ಮ್ ಶೀಟ್ಸ್‌ನಲ್ಲಿ ನಮೂದಿಸಿರುವ ಮಾಹಿತಿ ಅನ್ವಯ ವಿಮಾ ಪರಿಹಾರವನ್ನು ವಿಮಾ ಕಂಪನಿಯು ಒದಗಿಸುತ್ತದೆ.<br><br>ರೋಗ/ಕೀಟಬಾಧೆಯಿಂದಾಗುವ ಬೆಳೆಹಾನಿಗೆ NDRF/SDRF ಮಾರ್ಗಸೂಚಿಯನ್ವಯ ಪರಿಹಾರ ನೀಡಲು ಅವಕಾಶವಿರುವುದಿಲ್ಲ. |

| | | |
|---|---|---|
| (ಇ) | ಅಡಿಕೆ ಮರ ನಾಶವಾಗಿರುವ ಎಷ್ಟು ರೈತರಿಗೆ ಪರಿಹಾರ ಧನ ನೀಡಲಾಗಿದೆ; ಹಾಳಾಗಿರುವ ಅಡಿಕೆ ತೋಟಗಳ ಬಗ್ಗೆ ಸರ್ಕಾರದ ಮುಂದಿರುವ ಯೋಜನೆಗಳಾವುವು? (ವಿವರ ನೀಡುವುದು) | ಉಪ ಪ್ರಶ್ನೆ ಸಂಖ್ಯೆ (ಅ) ರಲ್ಲಿ ಉತ್ತರಿಸಲಾಗಿದೆ. |

ಸಂಖ್ಯೆ: HORTI 122 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)

ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು